ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ
ದಿನಾಂಕ : DATE 16/9/2020

# ದೋಣಿಮಲೈನಲ್ಲಿ ಮತ್ತೆ ಗಣಿಗಾರಿಕೆ ಸದ್ದು

## ಸಿಎಂ ಬಿಎಸ್‌ವೈ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆ ಒಪ್ಪಿಗೆ | ಸರ್ಕಾರಕ್ಕೆ ಇದರಿಂದ 647 ಕೋಟಿ ಆದಾಯ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದ ಬಳ್ಳಾರಿ ಜಿಲ್ಲೆಯ ದೋಣಿಮಲೈ ಪ್ರದೇಶದಲ್ಲಿನ ಎನ್‌ಎಂಡಿಸಿ ಸಂಸ್ಥೆಯ ಗಣಿಗಾರಿಕೆ ಗುತ್ತಿಗೆ ಅವಧಿ ನವೀಕರಣ ಸಮಸ್ಯೆ ಬಗೆಹರಿದಿರುವ ಹಿನ್ನೆಲೆಯಲ್ಲಿ ಮತ್ತೆ ಗಣಿಗಾರಿಕೆ ನಡೆಸಲು ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.

ಮಂಗಳವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಧಾರಗಳನ್ನು ಸುದ್ದಿಗೋಷ್ಠಿಯಲ್ಲಿ ತಿಳಿಸಿದ ಕಾನೂನು ಮತ್ತು ಸಂಸದೀಯ ಸಚಿವ ಜೆ.ಸಿ.ಮಾಧುಸ್ವಾಮಿ, ಇತ್ತೀಚೆಗೆ ಮುಖ್ಯಮಂತ್ರಿಗಳು ಮತ್ತು ಕೇಂದ್ರದ ಗಣಿಗಾರಿಕೆ ಸಚಿವರು ಸಭೆ ನಡೆಸಿ ಎನ್‌ಎಂಡಿಸಿ ಸಂಸ್ಥೆಯ ಗಣಿಗಾರಿಕೆ ಗುತ್ತಿಗೆ ಅವಧಿ ನವೀಕರಣ ಸಂಬಂಧ ಇದ್ದ ಸಮಸ್ಯೆಯನ್ನು ಬಗೆಹರಿಸಿದ್ದಾರೆ. ರಾಜ್ಯಕ್ಕೆ ನೀಡಲಾಗುತ್ತಿರುವ ಶೇ.15ರಷ್ಟು ರಾಯಲ್ಟಿಯನ್ನು ಶೇ.22.5ರಷ್ಟು ನೀಡುವಂತೆ ಮನವಿ ಮಾಡಲಾಗಿತ್ತು. ಇದಕ್ಕೆ ಕೇಂದ್ರವು ಸಕಾರಾತ್ಮಕವಾಗಿ ಸ್ಪಂದಿಸಿದೆ. ದೋಣಿಮಲೈನ 600 ಹೆಕ್ಟೇರ್ ಪ್ರದೇಶದಲ್ಲಿ ಗಣಿಗಾರಿಕೆ ಆರಂಭಿಸಲು ನಿರ್ಧರಿಸಲಾಗಿದೆ. ಇದರಿಂದ ವಾರ್ಷಿಕ 647 ಕೋಟಿ ರು. ಆದಾಯ ಬರುವ ನಿರೀಕ್ಷೆ ಇದೆ ಎಂದು ಹೇಳಿದರು.

ಎನ್‌ಎಂಡಿಸಿ ಕಂಪನಿಯ ಗಣಿಗಾರಿಕೆ ಗುತ್ತಿಗೆಯ 50 ವರ್ಷಗಳ ಅವಧಿ 2018ಕ್ಕೆ ಮುಕ್ತಾಯಗೊಂಡಿದೆ. ನವೀಕರಣ ಬಗ್ಗೆ ಸ್ಪಷ್ಟತೆ ಇರಲಿಲ್ಲ. 2020ರ ನಂತರ ಯಾವುದೇ ಗಣಿಯನ್ನು ವಹಿಸಿದರೆ ಕೇಂದ್ರ ಸರ್ಕಾರ ನಿಗದಿ ಮಾಡಿದ ಪ್ರೀಮಿಯಂ ದರವನ್ನು ಸಲ್ಲಿಸಬೇಕು. ನವೀಕರಣಕ್ಕೆ ಯಾವುದೇ ಅವಕಾಶ ಇರಲಿಲ್ಲ. ಈ ಬಗ್ಗೆ ಮುಖ್ಯಮಂತ್ರಿ ಮತ್ತು ಕೇಂದ್ರ ಗಣಿಗಾರಿಕೆ ಸಚಿವರ ಜತೆ ಇತ್ತೀಚೆಗೆ ಸಭೆ ನಡೆಸಲಾಗಿತ್ತು.

## ಹೊಸ ಪ್ರವಾಸೋದ್ಯಮ ನೀತಿ ಸೆ.27ಕ್ಕೆ ಜಾರಿ

**ಬೆಂಗಳೂರು:** ದೇಶದಲ್ಲಿಯೇ ರಾಜ್ಯವನ್ನು ಪ್ರವಾಸೋದ್ಯಮ ವಲಯದಲ್ಲಿ ಮೊದಲ ಸ್ಥಾನಕ್ಕೆ ಕೊಂಡೊಯ್ಯುವ 2020-25ನೇ ಸಾಲಿನ ಪ್ರವಾಸೋದ್ಯಮ ನೀತಿಗೆ ಇದೇ 27ರಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಚಾಲನೆ ನೀಡಲಿದ್ದಾರೆ.

ಮಂಗಳವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಪ್ರವಾಸೋದ್ಯಮ ನೀತಿ ಜಾರಿಗೆ ಅನುಮೋದನೆ ನೀಡಲಾಯಿತು. ವಿಶ್ವ ಪ್ರವಾಸೋದ್ಯಮ ದಿನವಾದ ಸೆ.27ರಂದು ಪ್ರವಾಸೋದ್ಯಮ ನೀತಿ ಜಾರಿಗೆ ತರಲು ತೀರ್ಮಾನಿಸಲಾಯಿತು. ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ, ರಾಜ್ಯದ ಪ್ರವಾಸಿತಾಣಗಳನ್ನು ಮೂಲಸೌಕರ್ಯ ಅಭಿವೃದ್ಧಿಗೊಳಿಸಿ ಪ್ರವಾಸಿಗರನ್ನು ಆಕರ್ಷಿಸುವ ಉದ್ದೇಶದಿಂದ 2020-25ನೇ ಸಾಲಿನ ಪ್ರವಾಸೋದ್ಯಮ ನೀತಿ ಜಾರಿಗೊಳಿಸಲಾಗುವುದು. ಈ ಸಂಬಂಧ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ. ಪ್ರವಾಸೋದ್ಯಮ ದಿನವಾದ ಸೆ.27ರಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಪ್ರವಾಸೋದ್ಯಮ ನೀತಿಯನ್ನು ಅನುಷ್ಠಾನಗೊಳಿಸಲಿದ್ದಾರೆ. ಅಂದು ಸಂಪೂರ್ಣವಾದ ವಿವರಗಳನ್ನು ನೀಡಲಿದ್ದಾರೆ ಎಂದು ಹೇಳಿದರು.

## ದೆಹಲಿಯಲ್ಲಿ ನೂತನ ಕರ್ನಾಟಕ ಭವನ ನಿರ್ಮಾಣ

**ಬೆಂಗಳೂರು:** ದೆಹಲಿಯ ಕರ್ನಾಟಕ ಭವನ-1 ಅನ್ನು ಸಂಪೂರ್ಣವಾಗಿ ನೆಲಸಮಗೊಳಿಸಿ ಹೊಸದಾಗಿ 120 ಕೋಟಿ ರು. ವೆಚ್ಚದಲ್ಲಿ ನಿರ್ಮಾಣ ಮಾಡಲು ರಾಜ್ಯ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದ್ದು, ಸೆ.18ರಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಕಟ್ಟಡ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಲಿದ್ದಾರೆ.

ಸಂಪುಟ ಸಭೆ ನಿರ್ಧಾರದ ಬಗ್ಗೆ ತಿಳಿಸಿದ ಸಚಿವ ಜೆ.ಸಿ.ಮಾಧುಸ್ವಾಮಿ, ದೆಹಲಿಯ ಕರ್ನಾಟಕ ಭವನ-1 ಸಂಪೂರ್ಣವಾಗಿ ನೆಲಸಮಗೊಳಿಸಿ ಅದೇ ಜಾಗದಲ್ಲಿ ಹೊಸದಾಗಿ 120 ಕೋಟಿ ರು. ವೆಚ್ಚದಲ್ಲಿ ನಿರ್ಮಿಸಲು ಒಪ್ಪಿಗೆ ನೀಡಲಾಗಿದೆ ಎಂದು ತಿಳಿಸಿದರು.